**All India Radio: Bangalore**
**National Bulletin In Kannada**
**10.01.2026 7.35 pm**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

**೧. ಸೋಮನಾಥ್ ಸ್ವಾಭಿಮಾನ್ ಪರ್ವದಲ್ಲಿ ಪಾಲ್ಗೊಳ್ಳಲು ಗುಜರಾತ್ ತಲುಪಿದ ಪ್ರಧಾನಿ ನರೇಂದ್ರ ಮೋದಿ**

**೨. ಜರ್ಮನಿಯ ಫೆಡರಲ್ ಚಾನ್ಸಲರ್ ಫ್ರೆಡ್ರಿಕ್ ಮೆರ್ಜ್ ಎರಡು ದಿನಗಳ ಭಾರತ ಭೇಟಿಗಾಗಿ ಸೋಮವಾರ ಆಗಮನ**

**೩. ಈ ವರ್ಷದ 'ಪರೀಕ್ಷಾ ಪೇ ಚರ್ಚಾ' ಕಾರ್ಯಕ್ರಮಕ್ಕಾಗಿ ನಾಲ್ಕು ಕೋಟಿಗೂ ಅಧಿಕ ಅಭ್ಯರ್ಥಿಗಳ ನೊಂದಣಿ**

**೪. ಡಬ್ಲ್ಯೂ ಪಿಎಲ್ ಟಿ-೨೦ ಕ್ರಿಕೆಟ್; ಯುಪಿ ವಾರಿಯರ್ಸ್ ವಿರುದ್ಧ ಗುಜರಾತ್ ಜೈಂಟ್ಸ್‌ಗೆ ೧೦ ರನ್‌ಗಳ ಜಯ**

**೫. ಪುರುಷರ ಏಕದಿನ ಅಂತಾರಾಷ್ಟ್ರೀಯ ಕ್ರಿಕೆಟ್; ಗುಜರಾತ್‌ನ ವಡೋದರದಲ್ಲಿ ನಾಳೆ ಭಾರತ-ನ್ಯೂಜಿಲೆಂಡ್ ಮುಖಾಮುಖಿ**

**<>><><*><><<>**

ಪ್ರಧಾನಿ ನರೇಂದ್ರ ಮೋದಿ ಅವರು ಮೂರು ದಿನಗಳ ಗುಜರಾತ್ ಭೇಟಿಗಾಗಿ ಇಂದು ಸೋಮನಾಥ್ ತಲುಪಿದರು. ಪ್ರಧಾನಿ, ಪ್ರಭಾಸ್ ಪಠಣದಲ್ಲಿ ಆಚರಿಸಲಾಗುತ್ತಿರುವ ಸೋಮನಾಥ ಸ್ವಾಭಿಮಾನ ಪರ್ವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ೧೦೨೬ನೇ ಇಸವಿಯಲ್ಲಿ ಮೊಹಮ್ಮದ್ ಘಜ್ನಿ, ಸೋಮನಾಥ ದೇವಾಲಯದ ಮೇಲೆ ಮೊದಲ ದಾಳಿ ನಡೆಸಿ ಒಂದು ಸಾವಿರ ವರ್ಷಗಳು ಸಂದ ಹಿನ್ನೆಲೆಯಲ್ಲಿ ಹಾಗೂ ೧೯೫೧ರಲ್ಲಿ ದೇವಾಲಯವನ್ನು ಪುನರ್ ಸ್ಥಾಪಿಸಿದ ೭೫ನೇ ವಾರ್ಷಿಕೋತ್ಸವದ ಸಂದರ್ಭದಲ್ಲಿ ಈ ಸ್ವಾಭಿಮಾನ ಪರ್ವವನ್ನು ಆಚರಿಸಲಾಗುತ್ತಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಸೋಮನಾಥ ದೇವಾಲಯಕ್ಕೆ ಭೇಟಿ ನೀಡಿ, ಓಂಕಾರ ಮಂತ್ರ ಪಠಣದಲ್ಲಿ ಭಾಗವಹಿಸಲಿದ್ದಾರೆ. ದೇವಾಲಯದಲ್ಲಿ ಡ್ರೋನ್ ಪ್ರದರ್ಶನವನ್ನು ಸಹ ಅವರು ವೀಕ್ಷಿಸಲಿದ್ದಾರೆ. ಶತಮಾನಗಳಿಂದ ಸೋಮನಾಥ ದೇವಾಲಯವನ್ನು ರಕ್ಷಿಸುತ್ತಾ ಪ್ರಾಣತ್ಯಾಗ ಮಾಡಿದ ಅನೇಕ ವೀರರನ್ನು ಗೌರವಿಸಲು ನಾಳೆ ಆಯೋಜಿಸಲಾಗಿರುವ ಶೌರ್ಯ ಯಾತ್ರೆಯಲ್ಲಿ ಪ್ರಧಾನಿ ಪಾಲ್ಗೊಳ್ಳಲಿದ್ದಾರೆ ಹಾಗೂ ಸೋಮನಾಥ್ ಮಹಾದೇವರಿಗೆ ಪೂಜೆ ಸಲ್ಲಿಸಲಿದ್ದಾರೆ. ನಂತರ ಸೋಮನಾಥ್‌ದಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ಬಳಿಕ ರಾಜ್‌ಕೋಟ್‌ಗೆ ತೆರಳಿ, ವೈಬ್ರಂಟ್ ಗುಜರಾತ್ ಪ್ರಾದೇಶಿಕ ಸಮಾವೇಶವನ್ನು ಉದ್ಘಾಟಿಸಲಿದ್ದಾರೆ.

**<>><><*><><<>**

ದೇಶ ಜಾಗತಿಕ ಶಕ್ತಿ ಕೇಂದ್ರವಾಗಿ ಹೊರಹೊಮ್ಮುವಲ್ಲಿ ಸ್ವಾವಲಂಬನೆ ಅತಿ ಮುಖ್ಯ ಪಾತ್ರ ವಹಿಸುತ್ತದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಅವರು ಜೋದ್‌ಪುರದಲ್ಲಿ ಇಂದು ಮಹೇಶ್ವರಿ ಸಮುದಾಯದ ರಾಷ್ಟ್ರೀಯ ಸಮ್ಮೇಳನ್ನುದ್ದೇಶಿಸಿ ಮಾತನಾಡಿ, ಸ್ಥಳೀಯ ಉತ್ಪನ್ನಗಳ ಬಳಕೆ ದೇಶವನ್ನು ಸ್ವಾವಲಂಬಿಯಾಗಿಸುತ್ತದೆ ಎಂದರು. ಮಾತೃಭಾಷೆ ಬಳಕೆಯ ಪ್ರಾಮುಖ್ಯತೆಯನ್ನು ವಿವರಿಸಿದ ಸಚಿವ ಅಮಿತ್ ಶಾ, ಯುವಜನತೆ ಇತರ ಭಾಷೆಗಳನ್ನು ಕಲಿಯುವ ಬಗ್ಗೆ ಆಸಕ್ತಿ ಬೆಳೆಸಿಕೊಳ್ಳಬೇಕು ಎಂದರು. ಲೋಕಸಭಾಧ್ಯಕ್ಷ ಓಂಬಿರ್ಲಾ, ರಾಜಸ್ಥಾನ ಮುಖ್ಯಮಂತ್ರಿ ಭಜನ್‌ಲಾಲ್ ಶರ್ಮಾ, ಕೇಂದ್ರ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

**<>><><*><><<>**

ಜರ್ಮನಿಯ ಫೆಡರಲ್ ಚಾನ್ಸಲರ್ ಫ್ರೆಡ್ರಿಕ್ ಮೆರ್ಜ್ ಎರಡು ದಿನಗಳ ಭಾರತ ಭೇಟಿಗಾಗಿ ನಾಡಿದ್ದು, ಸೋಮವಾರ ಆಗಮಿಸಲಿದ್ದಾರೆ. ಅವರು ಮೊದಲ ಹಂತದಲ್ಲಿ ಗುಜರಾತ್‌ನ ಸಬರಮತಿ ಆಶ್ರಮಕ್ಕೆ ಭೇಟಿ ನೀಡಿ, ಗೌರವ ಸಮರ್ಪಣೆ ಮಾಡಲಿದ್ದಾರೆ. ನಂತರ ಉಭಯ ದೇಶಗಳ ಸಾಂಸ್ಕೃತಿಕ ಸಂಬಂಧಗಳನ್ನು ಪ್ರತಿಬಿಂಬಿಸುವ ಅಂತಾರಾಷ್ಟ್ರೀಯ ಗಾಳಿಪಟ ಉತ್ಸವದಲ್ಲಿ ಪಾಲ್ಗೊಳ್ಳುವರು. ಬಳಿಕ ಫ್ರೆಡ್ರಿಕ್ ಮೆರ್ಜ್ ಮಹಾತ್ಮ ಮಂದಿರಲ್ಲಿ

ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ನಿಯೋಗಮಟ್ಟದ ಮಾತುಕತೆ ನಡೆಸಲಿದ್ದಾರೆ. ಭಾರತ ಸ್ವಾತಂತ್ರ ಚಳವಳಿ ಹಾಗೂ ಮಹಾತ್ಮಾಗಾಂಧೀಜಿಯವರ ಜೀವನ-ಸಾಧನೆ ಸಾದರಪಡಿಸುವ ದಾಂಡಿ ಕುಟೀರಕ್ಕೂ ಪ್ರಧಾನಿ ಭೇಟಿ ನೀಡಲಿದ್ದಾರೆ. ಎರಡನೇ ದಿನದಂದು ಚಾನ್ಸಲರ್ ಫೆಡ್ರಿಕ್ ಮೆರ್ಜ್, ಬೆಂಗಳೂರಿನ ಆಡುಗೋಡಿಯಲ್ಲಿರುವ ಭಾರತ-ಜರ್ಮನಿ ಸಹಯೋಗದ ಬಾಷ್ ಆವಿಷ್ಕಾರ ಮತ್ತು ತಯಾರಿಕಾ ಘಟಕಕ್ಕೆ ಭೇಟಿ ನೀಡಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಜರ್ಮನಿಯ ಫೆಡರಲ್ ಚಾನ್ಸಲರ್ ಅವರ ಭೇಟಿಯಿಂದಾಗಿ ಉಭಯ ದೇಶಗಳ ಆರ್ಥಿಕ, ತಾಂತ್ರಿಕ ಮತ್ತು ಕಾರ್ಯತಂತ್ರ ಸಹಭಾಗಿತ್ವ ಬಲಗೊಳ್ಳುವುದೆಂದು ನಿರೀಕ್ಷಿಸಲಾಗಿದೆ.

<>><><*><><<>

ವಿಶ್ವ ಪುಸ್ತಕ ಮೇಳ-೨೦೨೬ ನವದೆಹಲಿಯಲ್ಲಿಂದು ಆರಂಭವಾಯಿತು. ೫೩ನೇ ಆವೃತ್ತಿ ಒಟ್ಟು ೯ ದಿನಗಳ ಕಾಲ ನಡೆಯಲಿದ್ದು, ೩೫ ದೇಶಗಳ ಒಂದು ಸಾವಿರಕ್ಕೂ ಅಧಿಕ ಪ್ರಕಾಶಕರು ಇದರಲ್ಲಿ ಭಾಗವಹಿಸಿದ್ದಾರೆ. ಕೇಂದ್ರ ಶಿಕ್ಷಣ ಖಾತೆ ಸಚಿವ ಧರ್ಮೇಂದ್ರ ಪ್ರಧಾನ್, ವಿಶ್ವ ಪುಸ್ತಕ ಮೇಳ ಉದ್ಘಾಟಿಸಿ ಮಾತನಾಡಿ, ಪುಸ್ತಕಗಳು ಜ್ಞಾನವಾಹಿನಿಯಾಗಿವೆ. ಒಂದು ತಲೆಮಾರಿನ ಜನರನ್ನು ಮತ್ತೊಂದು ತಲೆಮಾರಿನ ಜನರೊಂದಿಗೆ ಬೆಸೆಯುತ್ತದೆ. ನಾಗರಿಕತೆಯ ಇತಿಹಾಸವನ್ನು ಸಂರಕ್ಷಿಸುವುದರ ಜೊತೆಗೆ ಸಮಾಜಕ್ಕೆ ನಿರ್ದೇಶನ ನೀಡುತ್ತದೆ. ಯುವಜನತೆ ಪುಸ್ತಕ ಓದುವ ಅಭಿರುಚಿ ಬೆಳೆಸಿಕೊಳ್ಳಬೇಕು ಎಂದರು. ಈ ಮೇಳದಲ್ಲಿ ವಿಶ್ವದ ವಿವಿಧ ಸ್ಥಳಗಳ ಪ್ರಕಾಶಕರು ಭಾಗವಹಿಸುತ್ತಿದ್ದು, ಇದು ಪ್ರತಿಷ್ಠಿತ ವೇದಿಕೆ ಹೊರಹೊಮ್ಮುತ್ತಿದೆ. ದೆಹಲಿ ವಿಶ್ವ ಪುಸ್ತಕ ಮೇಳ ದೇಶದ ಓದುವ ಸಂಸ್ಕೃತಿಯ ಅತಿದೊಡ್ಡ ಸಾರ್ವಜನಿಕ ಉತ್ಸವವಾಗಿದೆ ಎಂದು ಸಚಿವ ಧರ್ಮೇಂದ್ರ ಪ್ರಧಾನ್ ಹೇಳಿದರು.

<>><><*><><<>

ಈ ವರ್ಷದ 'ಪರೀಕ್ಷಾ ಪೇ ಚರ್ಚಾ' ಕಾರ್ಯಕ್ರಮಕ್ಕಾಗಿ ನಾಲ್ಕು ಕೋಟಿಗೂ ಅಧಿಕ ಅಭ್ಯರ್ಥಿಗಳು ನೊಂದಣಿ ಮಾಡಿಕೊಂಡಿದ್ದಾರೆ. ಕೇಂದ್ರ ಶಿಕ್ಷಣ ಖಾತೆ ಸಚಿವ ಧರ್ಮೇಂದ್ರ ಪ್ರಧಾನ್, ಸಾಮಾಜಿಕ ಮಾಧ್ಯಮದಲ್ಲಿ ಈ ವಿಷಯ ತಿಳಿಸಿದ್ದಾರೆ. ಕಳೆದ ವರ್ಷ ಮೂರೂವರೆ ಕೋಟಿಗೂ ಅಧಿಕ ನೊಂದಣಿಯಾಗಿ, ಗಿನ್ನಿಸ್ ವಿಶ್ವದಾಖಲೆ ಆಗಿತ್ತು. ಯುವ ಜನತೆಗೆ ಒತ್ತಡ ಮುಕ್ತ ಪರಿಸರ ಕಲ್ಪಿಸುವ ನಿಟ್ಟಿನಲ್ಲಿ ಹಮ್ಮಿಕೊಳ್ಳಲಾದ ದೇಶವ್ಯಾಪಿ ಆಂದೋಲನದಲ್ಲಿ ಎಲ್ಲ ಪರೀಕ್ಷಾ ಕಟ್ಟಾಳುಗಳು ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಕರೆ ನೀಡಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ 'ಪರೀಕ್ಷಾ ಪೇ ಚರ್ಚಾ' ಉಪಕ್ರಮ, ವಿದ್ಯಾರ್ಥಿಗಳು, ಪೋಷಕರು ಹಾಗೂ ಶಿಕ್ಷಕರನ್ನು ನೇರವಾಗಿ ಒಂದೇ ವೇದಿಕೆಗೆ ಕರೆತಂದು ಅವರಲ್ಲಿ ವಿಶ್ವಾಸ, ಯೋಗಕ್ಷೇಮ, ಏಕಾಗ್ರತೆ ತರುವಲ್ಲಿ ನೆರವಾಗುತ್ತಿದೆ ಎಂದು ಸಚಿವ ಧರ್ಮೇಂದ್ರ ಪ್ರಧಾನ್ ತಿಳಿಸಿದ್ದಾರೆ.

<>><><*><><<>

ಮುಂದಿನ ಮೂರು ದಿನಗಳ ಕಾಲ ಹಿಮಾಚಲ ಪ್ರದೇಶ, ಉತ್ತರಾಖಂಡ್, ಹರಿಯಾಣ, ಚಂಡೀಗಢ, ದೆಹಲಿ, ಮಧ್ಯಪ್ರದೇಶ, ಬಿಹಾರ್, ಪಶ್ಚಿಮಬಂಗಾಳ ಹಾಗೂ ದೇಶದ ಈಶಾನ್ಯ ಭಾಗದ ಕೆಲವು ಪ್ರದೇಶಗಳಲ್ಲಿ ತೀವ್ರ ಮಂಜು ಮುಸುಕುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ರಾಜಸ್ಥಾನ್, ತಮಿಳುನಾಡು, ಪುದುಚೆರಿಗಳಲ್ಲಿ ದಟ್ಟ ಮಂಜು ಬೀಳುವ ನಿರೀಕ್ಷೆಯಿದ್ದು, ಆರೆಂಜ್ ಅಲರ್ಟ್ ನೀಡಲಾಗಿದೆ. ಕರ್ನಾಟಕ ಸೇರಿದಂತೆ ಒಡಿಶಾ ಮತ್ತು ಪಂಜಾಬ್‌ಗಳಲ್ಲಿ ಮುಂದಿನ ಮೂರು ನಾಲ್ಕು ದಿನಗಳಲ್ಲಿ ಶೀತ ಹವಾಮಾನ ಮುಂದುವರಿಯಲಿದೆ.

<>><><*><><<>

ದೇಶದ ಸುರಕ್ಷತೆಗಾಗಿ ಅಪ್ರತಿಮ ಶೌರ್ಯ ಪ್ರದರ್ಶಿಸಿದ ಯೋಧರಿಗೆ, ಪಶ್ಚಿಮ ಕಮಾಂಡಿನ ಲೆಫ್ಟಿನೆಂಟ್ ಜನರಲ್ ಮನೋಜ್ ಕುಮಾರ್ ಕತಿಯಾರ್ ಇಂದು ಶೌರ್ಯ ಪ್ರಶಸ್ತಿ ನೀಡಿ ಗೌರವಿಸಿದರು. ಪಶ್ಚಿಮ ಕಮಾಂಡಿನ ನವದೆಹಲಿ ಕಚೇರಿಯಲ್ಲಿ ನಡೆದ ಸಮಾರಂಭದಲ್ಲಿ ಲೆಫ್ಟಿನೆಂಟ್ ಜನರಲ್ ಕತಿಯಾರ ಮಾತನಾಡಿ, 'ಆಪರೇಷನ್ ಸಿಂಧೂರ್' ಸೇರಿದಂತೆ ವಿವಿಧ ಕಾರ್ಯಾಚರಣೆಗಳಲ್ಲಿ ಅಸಾಧಾರಣ ಸಾಹಸ ಮೆರೆದ ಸೇನಾನಿಗಳಿಗೆ ವೃತ್ತಿಪಾರಮ್ಯದ ಪ್ರಶಸ್ತಿ ನೀಡಲಾಗಿದೆ ಎಂದರು. ಆಧುನಿಕ ಯುದ್ಧ ಸಾಮರ್ಥ್ಯ ಬಳಸಿ, ಉನ್ನತ ಕಾರ್ಯ ನಿರ್ವಹಣೆ ಸನ್ನದ್ಧತೆ ಇಂದಿನ ಅಗತ್ಯವಾಗಿದೆ. ವಿಶೇಷವಾಗಿ ಅತ್ಯಾಧುನಿಕ ತಂತ್ರಜ್ಞಾನ ಮತ್ತು ಡ್ರೋನ್ ಬಳಕೆ ಮುಖ್ಯವಾಗಿದೆ. ಮುಂದಿನ ದಿನಮಾನಗಳಲ್ಲಿ ತಂತ್ರಜ್ಞಾನ ನಿರ್ಣಾಯಕ ಪಾತ್ರ ವಹಿಸಲಿದೆ ಎಂದು ಲೆಫ್ಟಿನೆಂಟ್ ಜನರಲ್ ಮನೋಜ್ ಕುಮಾರ್ ಕತಿಯಾರ್ ಹೇಳಿದರು.

<>><><*><><<>

ಭಾರತದ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ ಕಚೇರಿಗಳು ದೇಶಾದ್ಯಂತ ಯಾವುದೇ ಅಡೆತಡೆ ಇಲ್ಲದೆ ಸತತವಾಗಿ ಕಾರ್ಯನಿರ್ವಹಿಸುತ್ತಿದ್ದು, ಆಹಾರ ಸುರಕ್ಷತೆ ನಿಯಮಾವಳಿ ಮತ್ತು ಪರವಾನಿಗಿ ಪ್ರಕ್ರಿಯೆ ಪೂರ್ಣಪ್ರಮಾಣದಲ್ಲಿ ನಡೆಯುತ್ತಿದೆ ಎಂದು ಕೇಂದ್ರ ವಾರ್ತಾ ಶಾಖೆಯ ಸತ್ಯಪರಿಶೀಲನಾ ಘಟಕ ಸ್ಪಷ್ಟಪಡಿಸಿದೆ. ಪ್ರಾಧಿಕಾರದಲ್ಲಿನ ಕೆಲ ಸಮಸ್ಯೆಗಳ ಹಿನ್ನೆಲೆಯಲ್ಲಿ ಆಹಾರ ವ್ಯಾಪಾರ ಪರವಾನಿಗಿ ಪ್ರಕ್ರಿಯೆಗೆ ಅಡಚಣೆ ಉಂಟಾಗಿದೆ ಎನ್ನುವ 'ದಿ ಎಕನಾಮಿಕ್ಸ್ ಟೈಮ್ಸ್' ದಿನಪತ್ರಿಕೆಯ ಲೇಖನದ ಮಾಹಿತಿಯನ್ನು ಸರ್ಕಾರ ಅಲ್ಲಗಳೆದಿದೆ. ಆಹಾರ ವ್ಯಾಪಾರ ನಡೆಸುವ ಪರವಾನಿಗೆಗೆ ಆಹಾರ ಪ್ರಾಧಿಕಾರದಿಂದ ಅನುಮೋದನೆಯ ಅಗತ್ಯವಿಲ್ಲ. ಪರವಾನಿಗಿ ಬಂಡವಾಳ ಹೂಡಿಕೆ ಅಥವಾ ಆಹಾರ ಸುರಕ್ಷತಾ ಗುಣಮಟ್ಟ ಜಾರಿಗೆ ಯಾವುದೇ ಕಾನೂನು ಅಥವಾ ಪ್ರಕ್ರಿಯೆ ಅಡಚಣೆಗಳು ಇಲ್ಲ ಎಂದು ಸ್ಪಷ್ಟಪಡಿಸಲಾಗಿದೆ.

**<>><><*><><<>**

ನವಿ ಮುಂಬೈನಲ್ಲಿ ನಡೆದ ಮಹಿಳಾ ಪ್ರೀಮಿಯರ್ ಲೀಗ್ - ಡಬ್ಲ್ಯೂಪಿಎಲ್ ಟಿ-೨೦ ಕ್ರಿಕೆಟ್‌ನ ಇಂದಿನ ಮೊದಲ ಪಂದ್ಯದಲ್ಲಿ ಯುಪಿ ವಾರಿಯರ್ಸ್ ವಿರುದ್ಧ ಗುಜರಾತ್ ಜೈಂಟ್ಸ್ ತಂಡ ೧೦ ರನ್‌ಗಳ ಗೆಲುವು ಸಾಧಿಸಿದೆ. ಮೊದಲು ಬ್ಯಾಟ್ ಮಾಡಿದ ಗುಜರಾತ್ ತಂಡ, ನಿಗದಿತ ೨೦ ಓವರ್‌ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೨೦೭ ರನ್ ಗಳಿಸಿತು.

೨೦೮ ರನ್‌ಗಳ ಗುರಿ ಬೆನ್ನತ್ತಿದ ಯುಪಿ ವಾರಿಯರ್ಸ್ ತಂಡ ನಿಗದಿತ ೨೦ ಓವರ್‌ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೧೯೭ ರನ್ ಗಳಿಸಲಷ್ಟೇ ಶಕ್ತವಾಯಿತು. ದಿನದ ಎರಡನೇ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಹಾಗೂ ದೆಹಲಿ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ದೆಹಲಿ ತಂಡ ಫೀಲ್ಡಿಂಗ್ ಆಯ್ದುಕೊಂಡಿದೆ.

**<>><><*><><<>**

ಭಾರತ-ನ್ಯೂಜಿಲೆಂಡ್ ತಂಡಗಳ ನಡುವೆ ಗುಜರಾತ್‌ನ ವಡೋದರದಲ್ಲಿ ನಾಳೆ ಮೊದಲ ಏಕದಿನ ಅಂತಾರಾಷ್ಟ್ರೀಯ ಕ್ರಿಕೆಟ್ ಪಂದ್ಯ ನಡೆಯಲಿದೆ. ಒಟ್ಟು ಮೂರು ಏಕದಿನ ಪಂದ್ಯಗಳು ನಡೆಯಲಿವೆ. ಹಿರಿಯ ಬ್ಯಾಟರ್‌ಗಳಾದ ವಿರಾಟ್ ಕೊಹ್ಲಿ ಹಾಗೂ ರೋಹಿತ್ ಶರ್ಮಾ ಈ ಸರಣಿಯಲ್ಲಿ ಆಟವಾಡುವ ನಿರೀಕ್ಷೆಯಿದೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ ><><<>**